ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ಸೋಮವಾರ, ದಿನಾಂಕ: 09ನೇ ಮಾರ್ಚ್, 2020

ಕಲಬುರಗಿ ಕೈಗಾರಿಕಾ ತರಬೇತಿ ಸಂಸ್ಥೆಗಳ ಕುರಿತು

ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು)

458 (421) ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಲಬುರಗಿ ಜಿಲ್ಲೆಯಲ್ಲಿ ಎಷ್ಟು ಸರ್ಕಾರಿ ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಕೈಗಾರಿಕಾ ತರಬೇತಿ ಕೇಂದ್ರಗಳಿವೆ; (ವಿವರ ನೀಡುವುದು)

(ಆ) ಕಲಬುರಗಿ ಜಿಲ್ಲೆಯಲ್ಲಿ ಎಷ್ಟು ಸರ್ಕಾರಿ ಐ.ಟಿ.ಐ. ಸಂಸ್ಥೆಗಳಿವೆ; ಈ ಸಂಸ್ಥೆಗಳಿಗೆ ಸ್ವಂತ ಕಟ್ಟಡ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರವಾದ ಮಾಹಿತಿ ನೀಡುವುದು)

(ಇ) ಕಲಬುರಗಿ ಖಾಸಗಿ ಅನುದಾನಿತ ಕೈಗಾರಕಾ ತರಬೇತಿ ಸಂಸ್ಥೆಗಳಿಗೆ ಥಾಮಸ್ ವರದಿ ಅನ್ವಯ ಅನುದಾನ ಸಂಹಿತೆಯನ್ನು ಯಾವಾಗ ಜಾರಿಗೆ ತರಲಾಗುವುದು ;

(ಈ) ಕಲಬುರಗಿ ಖಾಸಗಿ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ನಿವೃತ್ತಿ/ನಿಧನದಿಂದ ತೆರವಾದ ಹುದ್ದೆಗಳನ್ನು ತುಂಬಿಕೊಳ್ಳಲು ಯಾವ ವರ್ಗದವರಿಗೆ ಅನುಮತಿ ನೀಡಲಾಗುತ್ತಿದೆ ? (ಮಾಹಿತಿ ನೀಡುವುದು)